ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು) :

ಅ) ಒಟ್ಟು 28,934 ಕೆರೆಗಳು

ಆ) 6,34,483

ಇ) ಕೆರೆಗಳ ಅಭಿವೃದ್ಧಿಗಾಗಿ ಪ್ರತಿ ವರ್ಷ ಆಯವ್ಯಯದಲ್ಲಿ ಕೆರೆ ಕಲ್ಯಾಣ, ಕೆರೆಗಳ ಜೀರ್ಣೋದ್ಧಾರ ಮತ್ತು ಕೆರೆಗಳ ಅಭಿವೃದ್ಧಿ ಶೀರ್ಷಿಕೆಯಡಿಯಲ್ಲಿ ಹಣ ಒದಗಿಸುತ್ತಿದ್ದು, ಕೆರೆಗಳ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುಲಾಗುತ್ತಿದೆ ಇದ್ದಲ್ಲದೆ, ಕೆರೆಗಳಲ್ಲಿ ಶೇಖರಣೆಯಾದ ಹೂಳನ್ನು ಎತ್ತುವ ಕಾರ್ಯಕ್ರಮವನ್ನು ಕ್ರಿಯಾ ಯೋಜನೆಯಲ್ಲಿ ಅಳವಡಿಸಲಾಗಿದೆ. ಏರಿ ದುರಸ್ತಿ, ನಾಲೆ ದುರಸ್ತಿ ಮುಂತಾದ ಕಾರ್ಯಕ್ರಮಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ.

ತುಮಕೂರು ತಾಲ್ಲೂಕು ಹೊನ್ನುಡಿಕೆಯಲ್ಲಿ ವಿದ್ಯುತ್ ಉಪಕೇಂದ್ರಗಳ ಸ್ಥಾಪನೆ

1254 -ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ತಾಲ್ಲೂಕು ಹೊನ್ನುಡಿಕೆಯಲ್ಲಿ ಅವಶ್ಯಕತೆಯನ್ನರಿತು 66:11 ಕೆ.ವಿ.ಯ ವಿದ್ಯುತ್ ಉಪ-ಕೇಂದ್ರವನ್ನು ಸ್ಥಾಪಿಸಲು ಅನುಮೋದನೆ ನೀಡಿ 1998-99ರಲ್ಲಿ ಕಾಮಗಾರಿ ಪ್ರಾರಂಭಿಸಲಾಗುವುದೆಂದು ಸರ್ಕಾರದವರು ಆಶ್ವಾಸನೆ ನೀಡಿರುವುದು ನಿಜವೇ?

ಆ) ಹಾಗಿದ್ದಲ್ಲಿ, ಯಾವಾಗ ಕೆಲಸವನ್ನು ಪ್ರಾರಂಭಿಸಲಾಗುವುದು?

ಶ್ರೀ ಶರಣಬಸಪ್ಪ ದರ್ಶನಾಪುರ್ (ಇಂಧನ ರಾಜ್ಯ ಸಚಿವರು) :

ಅ) ತುಮಕೂರು ತಾಲ್ಲುಕು ಹೊನ್ನುಡಿಕೆಯಲ್ಲಿ 66:11 ಕೆವಿಯ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸುವ ಕಾಮಗಾರಿಯನ್ನು 9ನೇ ಪಂಚವಾರ್ಷಿಕ ಯೋಜನೆಯಲ್ಲಿ ಸೇರಿಸಲಾಗಿದೆ. ಈ ಯೋಜನೆಗೆ ಮಂಡಳಿಯ ತಾಂತ್ರಿಕ ಸಮಿತಿಯ ಅನುಮೋದನೆ ಹಾಗೂ ಆಡಳಿತಾತ್ಮಕ ಒಪ್ಪಿಗೆಯನ್ನು ಪಡೆಯಬೇಕಾಗಿರುವುದರಿಂದ ಈ ಕಾಮಗಾರಿಯನ್ನು ಪ್ರಾರಂಭಿಸುವ ಸಮಯದ ಬಗ್ಗೆ ಈಗ ಖಚಿತವಾಗಿ ತಿಳಿಸಲು ಸಾಧ್ಯವಿರುವುದಿಲ್ಲ.

ಕುಣಿಗಲ್‌ನಲ್ಲಿ ಅಗ್ನಿಶಾಮಕ ಠಾಣೆ ಮಂಜೂರಾತಿ.

1255 -ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಕಾರಾಗೃಹ, ಗೃಹರಕ್ಷಕ ದಳ, ಸೈನಿಕಕಲ್ಯಾಣ ಮತ್ತು ಅಗ್ನಿಶಾಮಕ ಸೇವೆಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಿಗಲ್‌ನಲ್ಲಿ ಅಗ್ನಿಶಾಮಕ ಠಾಣೆ ಮಂಜೂರಾಗಿದೆಯೇ?

ಅ) ಹಾಗಿದ್ದಲ್ಲಿ ಎಂದು ಪ್ರಾರಂಭಿಸಲಾಗುವುದು?

ಶ್ರೀ ವಿ. ಸೋಮಣ್ಣ (ಕಾರಾಗೃಹ, ಪೌರರಕ್ಷಣೆ, ಸೈನಿಕ ಕಲ್ಯಾಣ ಮತ್ತು ಅಗ್ನಿಶಾಮಕ ಸೇವೆಗಳ ರಾಜ್ಯ ಸಚಿವರು) :

ಅ) ಸರ್ಕಾರಿ ಆದೇಶ ಸಂಖ್ಯೆ : ಒಇ 163 ಕಅಸೇ 96 ದಿನಾಂಕ 31.3.97ರಲ್ಲಿ ಒಂದು ಅಗ್ನಿಶಾಮಕ ಠಾಣೆಯನ್ನು ಮಂಜೂರು ಮಾಡಿದೆ.

ಆ) ಕುಣಿಗಲ್ ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಹೊಸ ಅಗ್ನಿಶಾಮಕ ಠಾಣೆ ಸ್ಥಾಪಿಸಲು ಸೂಕ್ತ ನಿವೇಶನ ನೀಡಲು ಕೋರಲಾಗಿದೆ. ನಿವೇಶನ ಒದಗಿಸಿದ ನಂತರ ಅಗ್ನಿಶಾಮಕ ಠಾಣೆಯನ್ನು ಪ್ರಾರಂಭಿಸಲಾಗುವುದು.

ಕೆ.ಇ.ಬಿ.ಯಲ್ಲಿ ಲೈನ್‌ಮನ್‌ಗಳ ಕೊರತೆ.

1256 - ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಇಂಧನ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೆ.ಇ.ಬಿ.ಯಲ್ಲಿ ಲೈನ್‌ಮೆನ್‌ಗಳ ಕೊರತೆಯಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಕೊರತೆಯನ್ನು ನೀಗಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಶರಣಬಸಪ್ಪ ದರ್ಶನಾಪುರ್ (ಇಂಧನ ರಾಜ್ಯ ಸಚಿವರು) :

ಅ) ಹೌದು.

ಆ) ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯಲ್ಲಿರುವ ಸಿಬ್ಬಂದಿ ಕೊರತೆಯನ್ನು ನೀಗಲು ಸರ್ಕಾರವು ಪತ್ರ ಸಂಖ್ಯೆ : ಡಿಇ 184 ಇಬಿಎಸ್ 95, ದಿನಾಂಕ 2612.1996ರಲ್ಲಿ 2500 ಸಹಾಯಕ ಲೈನ್‌ಮೆನ್ ಹುದ್ದೆಗಳು ಸೇರಿದಂತೆ ನೇಮಕಾತಿಗೆ ಅನುಮೋದನೆ ನೀಡಿದೆ. ಅದರಂತೆ, ಮಂಡಳಿಯು ಸಹಾಯಕ ಲೈನ್‌ಮೆನ್‌ಗಳ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಸಂಖ್ಯೆ: ಕವಿಮಂ:ಬಿ 16:4739:8081, ದಿನಾಂಕ 20.5.1997ರಲ್ಲಿ ಅರ್ಹ ಅಭ್ಯರ್ಥಿಗಳ ಅರ್ಜಿಗಳನ್ನು ಆಹ್ವಾನಿಸಿ ನಿಯಮದಂತೆ ದೈಹಿಕ ಅರ್ಹತಾ ಪರೀಕ್ಷೆ ನಡೆಸಿ, ಜಾರಿಯಲ್ಲಿರುವ ಮೀಸಲಾತಿ ನಿಯಮ ಪಾಲಿಸಿ, ಈವರೆಗೆ ವಿವಿಧ ವಿಭಾಗಗಳಲ್ಲಿ 1200 ಅಭ್ಯರ್ಥಿಗಳ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿದೆ. ಉಳಿದ 1300 ಹುದ್ದೆಗಳನ್ನು ಭರ್ತಿಮಾಡಲು ಮಜ್ದೂರ್‌ಗಳನ್ನು ಆಯ್ಕೆಮಾಡುವ ಪ್ರಕ್ರಿಯೆಯನ್ನು ಸಧ್ಯದಲ್ಲಿ ಪ್ರಾರಂಭಿಸಲಾಗುವುದು.